ಕರ್ನಾಟಕ ವಿಧಾನಸಭೆ

ಮಂಗಳವಾರ 26ನೇ ಮಾರ್ಚ್ 2002 ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳ್ಳಿಗ್ಗೆ : 10.00 ಗಂಟೆ 20 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರು ಶ್ರೀ ಎಂ.ವಿ. ವೆಂಕಟಪ್ಪರವರು ಪೀಠವನ್ನು ಆಲಂಕರಿಸಿದ್ದರು.

1. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಕಾರ್ಯದರ್ಶಿ, ವಿಧಾನ ಸಭೆ:- ಮಾನ್ಯ ಅಧ್ಯಕ್ಷರೇ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ ಕೆಳಕಂಡ ವಿದೇಯಕಗಳನ್ನು ಸಬೆಯ ಮುಂದಿಡುತ್ತೇನೆ.

1. ಕರ್ನಾಟಕ ನೀರಾವರಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2002.

2. ಕರ್ನಾಟಕ ಕೊಳಚೆ ಪ್ರದೇಶಗಳ (ಮೇಲ್ಪಾಟು ಮತ್ತು ನಿರ್ಮೂಲನೆ) ಮತ್ತು ಇತರ ಕೆಲವು ಕಾನೂನುಗಳ (ತಿದ್ದುಪಡಿ) ವಿಧೇಯಕ, 2002.

ಅಧ್ಯಕ್ಷರು:- ಮಂಡಿಸಲಾಯಿತು.

2. ಶಾಸನ ರಚನೆ

ಅ. ವಿಧೇಯಕಗಳನ್ನು ಮಂಡಿಸುವುದು.

(i) ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕ, 2002

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರು):- ಮಾನ್ಯ ಅಧ್ಯಕ್ಷರೇ, ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕ, 2002 ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕ, 2002ರ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಆರ್.ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರು):- ಮಾನ್ಯ ಅಧ್ಯಕ್ಷರೇ, ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ವಿಧೇಯಕ 2002 ಅನ್ನು ಸಭೆಯ ಮುಂದೆ ಮಂಡಿಸುತ್ತೇನೆ.